**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.293/2021**

ಪಿ.ಡಬ್ಲ್ಯೂಃ 4

ಸಿ.ಡಬ್ಲ್ಯೂಃ 4

ಸಾಕ್ಷಿದಾರರ ಹೆಸರು ಃ ವಜೀರ್

ತಂದೆಯ ಹೆಸರುಃ ಃಮಹಮ್ಮದ್ ಸಾಬ್

ವಯಸ್ಸು ಃ **61 ವರ್ಷ**

ಉದ್ಯೋಗ ಃ ವ್ಯವಸಾಯ

ವಾಸಸ್ಥಳ ಃ ಕರಕುಚ್ಚಿ ಎ ಕಾಲೋನಿ

**ದಿನಾಂಕ:22-12-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ ಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ವರ್ಷಗಳ ಹಿಂದೆ ನಾನು ಕರಕುಚ್ಚಿ ಎ ಕಾಲೋನಿಯಲ್ಲಿ ನಾನು ರಸ್ತೆಯಲ್ಲಿ ಬರುತ್ತಿರುವಾಗ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ -7 ರಲ್ಲಿತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕಃ 10-06-2020 ರಂದು ಬೆಳಿಗ್ಗೆ 11-00 ರಿಂದ 12-00 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಹೋಬಳಿ ಸಿದ್ದಿಪುರ ಗ್ರಾಮದ ಭದ್ರಾಹೊಳೆ ಹತ್ತಿರ ಆರೋಪಿಯು ಅಕ್ರಮವಾಗಿ ಎತ್ತಿನಗಾಡಿಯಲ್ಲಿ ಮರಳನ್ನು ಸಾಗಿಸುತ್ತಿದ್ದಬಗ್ಗೆ ಪೊಲೀಸರು ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನೀವು ಸಹಿ ಮಾಡಿರುತ್ತಿರಾ ಎಂದರೆ ಸಾಕ್ಷಿ ಸಹಿ ಮಾಡಿರುತ್ತೇನೆ, ಆದರೆ ವಿಚಾರ ತಿಳಿದಿರುವುದಿಲ್ಲ ಎಂದು ನುಡಿದಿರುತ್ತಾರೆ. ನಿಮ್ಮ ಸಮಕ್ಷಮದಲ್ಲಿ ಮಹಜರ್ ಕ್ರಮವನ್ನು ಜರುಗಿಸಿ ನೀವೇ ಸ್ಥಳವನ್ನು

ತೋರಿಸಿರುತ್ತಿರಾ, ನಿಮಗೆ ಎಲ್ಲಾ ವಿಚಾರ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದಿರಾ ಎಂದರೆ ಸರಿಯಲ್ಲ.

**ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.**

ಪಾಟೀ ಸವಾಲು ಇಲ್ಲ

**ಮರುವಿಚಾರಣೆಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

Sd/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**